**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.1090/2024**

ಪಿ.ಡಬ್ಲ್ಯೂ: 3

ಸಿ.ಡಬ್ಲ್ಯೂ: 3

ಸಾಕ್ಷಿದಾರರ ಹೆಸರು : ಗೌಸ್ ಪೀರ್

ತಂದೆಯ ಹೆಸರು: : ಬಾಷಾ

ವಯಸ್ಸು : **34 ವರ್ಷ**

ಉದ್ಯೋಗ : ಆಟೋ ಚಾಲಕ

ವಾಸಸ್ಥಳ : ರಂಗೇನಹಳ್ಳಿ

**ದಿನಾಂಕ: 04-08-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ಮೂರು ವರ್ಷಗಳ ಹಿಂದೆ ಸಂಜೆ ಗಲಾಟೆಯಾದ ವಿಚಾರವಾಗಿ ಪೊಲೀಸರು ಮಹಜರ್ ಕ್ರಮವನ್ನು ಜರುಗಿಸಿದ್ದು, ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುತ್ತದೆ. ನನ್ನ ಸಮಕ್ಷಮದಲ್ಲಿ ಪೊಲೀಸರು ಒಂದು ಕಲ್ಲನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-**2** ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-**2**(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-**3** ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**( ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ: **28-12-2023** ರಂದು ಮಧ್ಯಾಹ್ನ **12-00** ರಿಂದ **1-00** ಗಂಟೆಯವರೆಗೆ ಲಕ್ಕವಳ್ಳಿ ಹೋಬಳಿ ರಂಗೇನಹಳ್ಳಿ ಗ್ರಾಮದ ಮರಳು ಮೋರಿ ಹತ್ತಿರ ಟಿ ಎಂ ರಸ್ತೆಯ ಹತ್ತಿರ ಗಲಾಟೆ

ವಿಚಾರವಾಗಿ ಪೊಲೀಸರು ಪೊಲೀಸರು ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನೀವು ಸಹಿ ಮಾಡಿರುತ್ತಿರಾ ಎಂದರೆ ಸಾಕ್ಷಿ ಸಹಿ ಮಾಡಿರುತ್ತೇನೆಂದರೆ ಸರಿ.

**<u>ಪಾಟೀ ಸವಾಲು ಃ ಆರೋಪಿ ಪರ</u>** <u>ಶ್ರೀಮತಿ ಬಿ ಎಂ</u> **<u>ವಕೀಲರಿಂದ.</u>**

ಗಲಾಟೆಯಾದ ಬಗ್ಗೆ ಮೊಹಮ್ಮದ್ ಇಸ್ರಾಲ್ ನನಗೆ ಕರೆ ಮಾಡಿ ತಿಳಿಸಿರುತ್ತಾರೆ. ಮಹಜರ್ ನಲ್ಲಿ ಬರೆದಿರುವ ವಿಚಾರ ನಿಮಗೆ ತಿಳಿದಿರುವುದಿಲ್ಲ ಎಂದರೆ ಸಾಕ್ಷಿ ಅದರಲ್ಲಿ ಗಲಾಟೆಯಾದ ಬಗ್ಗೆ ಬರೆದಿರುತ್ತಾರೆಂದು ನುಡಿದಿರುತ್ತಾರೆ. ನಾನು ಚಾಸಾ-1 ರವರ ಜೊತೆ ನ್ಯಾಯಾಲಯಕ್ಕೆ ಬಂದಿರುತ್ತೇನೆಂದರೆ ಸರಿ. ಚಾಸಾ-1 ಮತ್ತು 4 ರವರು ನಿಮ್ಮ ಸ್ನೇಹಿತರಾದ ಕಾರಣ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದಿರಾ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದೆ ಇರುವ ಮುದ್ದೆ ಮಾಲನ್ನು ನೀವೆ ಸೃಷ್ಠಿ ಮಾಡಿರುತ್ತಿರಾ ಎಂದರೆ ಸರಿಯಲ್ಲ. ಆರೋಪಿತರಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

**<u>ಮರುವಿಚಾರಣೆ</u>ಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

1 ನೇ **ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**